ಈ ಕಾಮಗಾರಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ರೂ. 10.22 ಕೋಟಿಗೆ ಅಂದಾಜು ಪಟ್ಟಿ ತಯಾರಿಸಿ ಸಲ್ಲಿಸಿರುತ್ತದೆ. ಸದರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು ಸರ್ಕಾರದ ಪರಿಶೀಲನೆಯಲ್ಲಿದೆ.

ಅನುದಾನದ ಕೊರೆತೆಯಿಂದಾಗಿ ಕಾಮಗಾರಿ ಪ್ರಾರಂಭಿಸಲು ವಿಳಂಬವಾಗಿದೆ.

ಈ) ಅನುದಾನದ ಲಭ್ಯತೆ ಅನುಗುಣವಾಗಿ, ಕಾಮಗಾರಿ ಪ್ರಾರಂಭಿಸಲಾಗುವುದು.

ಶಿಥಿಲಗೊಂಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರ

557(1129); ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ (ನಿಪ್ಪಾಣಿ)

ಅ) ನಿಪ್ಪಾಣಿ ಮತಕ್ಷೇತ್ರದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ; ಅಲ್ಲಿ ವೈದ್ಯಾಧಿಕಾರಿಗಳ/ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ?

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಯಾವ ಕೇಂದ್ರಗಳು ಶಿಥಿಲಗೊಂಡಿರುತ್ತವೆ; ಈ ಬಗ್ಗೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆಯೇ;

ಇ) ಶಿಥಿಲಗೊಂಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರವು ಯಾವಾಗ ಅನುದಾನ ಬಿಡುಗಡೆಗೊಳಿಸುವುದು;

ಈ) ನಿಪ್ಪಾಣಿ ನಗರದಲ್ಲಿ ಟ್ರಾಮಾಸೆಂಟರ್ ಆರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು;

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ನಿಪ್ಪಾಣಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ವಿವರ ಕೆಳಕಂಡಂತಿದೆ.

1. ಬೆನಾಡಿ. 2. ಸೌಂದಲಗಾ, 3. ಬೇಡಕಿಹಾಳ. 4. ಅಕ್ಕೋಳ. 5. ಗಳತಗಾ. 6. ಕಾರದಗಾ. 7. ಪಟ್ಟಣಕುಡಿ. 8. ಮಾಣಕಾಪೂರ. 9. ಮಾಂಗೂರು. 10. ಬೋರಗಾಂವ.

ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡುವ ಪ್ರಸ್ತಾವನೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ. ಪ್ರಸ್ತುತ 1582 ಗ್ರೂಪ್ 'ಡಿ' ಹಾಗೂ 436 ವಾಹನಚಾಲಕರ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.

ಆ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ನಿಪ್ಪಾಣಿ ಮತಕ್ಷೇತ್ರದಲ್ಲಿ ಬೆನಾಡಿ, ಸೌಂದಲಗಾ ಹಾಗೂ ಕಾರದಗಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡಗಳು ಶಿಥಿಲಗೊಂಡಿರುವುದು. ಪ್ರಸ್ತಾವನೆ ಸಲ್ಲಿಕೆಯಾಗಿದೆ.

ಇ) ಸದರಿ ಕಾಮಗಾರಿಗಳನ್ನು 2015-16ನೇ ಸಾಲಿನ ನಬಾರ್ಡ್ ಯೋಜನೆಯಡಿ ಕೈಗೊಳ್ಳಲು ಉದ್ದೇಶಿಸಲಾಗಿದೆ. ನಬಾರ್ಡ್‌ನಿಂದ ಅನುಮೋದನೆಗೊಂಡ ನಂತರ ನಬಾರ್ಡ್‌ನಿಂದ ಸಾಲದ ರೂಪದಲ್ಲಿ ಅನುದಾನ ಬಿಡುಗಡೆಯಾಗುತ್ತದೆ.

ಈ) ಇರುವುದಿಲ್ಲ.

ಉದ್ಭವಿಸುವುದಿಲ್ಲ.